ಅಸಲು ದಾವೆ ಸಂ.477/2021 ಡಿಡಬ್ಲ್ಯೂ -1

**ದಿನಾಂಕ 02-06-2026 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಿಂದಃಃ**

ನಾನು ಪ್ರತಿವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈ ದಿನ ಕೆಲವೊಂದು ದಾಖಲಾತಿಗಳನ್ನು ಹಾಜರು ಪಡಿಸಿರುತ್ತೇನೆ.

ಸಾಕ್ಷಿಯು ನಿವೇಶನ ಹಕ್ಕು ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ-1 ಎಂದು, ಸಾಕ್ಷಿಯು ಫಲಾನುಭವಿಗಳ ಮಾಹಿತಿಯ ದೃಢೀಕೃತ ದಾಖಲೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ-2 ಎಂದು, ಸಾಕ್ಷಿಯು ಇಂದಿರಾ ಆವಾಸ್ ಯೋಜನೆಯ ಫಲಾನುಭವಿಗಳ ದೃಢೀಕೃತ ಪ್ರತಿಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಡಿ-3 ಎಂದು, ಸಾಕ್ಷಿಯು ಬಸವ ಇಂದಿರಾ ವಸತಿ ಯೋಜನೆಯ ಫಲಾನುಭವಿಗಳ ಅರ್ಜಿಯ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ-4 ಎಂದು, ಸಾಕ್ಷಿಯು ದಿ.15-10-2022 ರ ಕಛೇರಿ ಆದೇಶದ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ-5 ಎಂದು, ಸಾಕ್ಷಿಯು ದಿ.25-05-2022 ರ ಆದೇಶದ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ-6 ಎಂದು, ಸಾಕ್ಷಿಯು 2 ತೆರಿಗೆ ಪಾವತಿಸಿದ ರಶೀದಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಡಿ-7 & 8 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯ ಕೋರಿದ್ದು ಸಮಯಾವಕಾಶ ನೀಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).**

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆ.ಎಂ.ಎಫ್.ಸಿ., ಸಿಂಧನೂರು.**